ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಪಾವಗಡ ನ್ಯಾಯಾಲಯ

ಓ.ಎಸ್. ಸಂಖ್ಯೆ **119/2017**

ದಿನಾಂಕ **18.02.2026** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಪಿ.ಡಬ್ಲ್ಯೂ-1

<u>ಪಾಟೀ ಸವಾಲುಃ ಪ್ರತಿವಾದಿಯ ಪರ ಶ್ರೀ.ಎ.ಎನ್.ಆರ್ ವಕೀಲರಿಂದಃ</u>

ದಾವಾ ಸ್ವತ್ತಿನ ಖಾತೆ ನಂ.240/391 ಆಗಿದೆ. ದಾವಾ ಸ್ವತ್ತು ನನ್ನ ತಂದೆಗೆ ಸರ್ಕಾರದಿಂದ (ಬ್ಲಾಕ್ ಡೆವೆಲಪ್ಮೆಂಟ್ ಆಫೀಸ್, ಪಾವಗಡ) ಮಂಜೂರು ಆಗಿತ್ತು ಎಂದರೆ ಸರಿ. 4 ನೇ ಪ್ರತಿವಾದಿ ನನ್ನ ತಂಗಿ. ದಿ.04.05.1993 ರಲ್ಲಿ ನನ್ನ ತಂದೆ 4 ನೇ ಪ್ರತಿವಾದಿಗೆ ವಿಲ್ ಮೂಲಕ ಬರೆದುಕೊಟ್ಟಿದ್ದಾರೆ ಎಂದರೆ ಸರಿಯಲ್ಲ. 4 ನೇ ಪ್ರತಿವಾದಿ ನನ್ನ ತಾಯಿಯ ವಿರುದ್ಧ ಓ.ಎಸ್.ನಂ.395/2013 ರಂತೆ ದಾವೆ ದಾಖಲಿಸಿದ್ದರು ಎಂದರೆ ನನಗೆ ಗೊತ್ತಿಲ್ಲ. ಸದರಿ ದಾವೆ ರಾಜಿಯಾಗಿ 4 ನೇ ಪ್ರತಿವಾದಿ ಹಸೆರಿಗೆ ದಾವಾ ಸ್ವತ್ತು ಹೋಗಿದೆ ಎಂದರೆ ನನಗೆ ಗೊತ್ತಿಲ್ಲ. ವಿಲ್ ಮೇಲೆ 4 ನೇ ಪ್ರತಿವಾದಿ ಹೆಸರಿಗೆ ಖಾತೆ ಆಗಿದೆ ಎಂದರೆ ನನಗೆ ಮೋಸ ಮಾಡಿ ಮಾಡಿಸಿಕೊಂಡಿದ್ದಾರೆ.

2. ಖಾತೆ ರದ್ದುಪಡಿಸಲು ಮತ್ತು ವಿಲ್ ರದ್ದುಪಡಿಸಲು ಹಾಗೂ ಡಿಕ್ರಿ ರದ್ದುಪಡಿಸಲು ನಾನು ದಾವೆಯಲ್ಲಿ ಯಾವುದೇ ಪರಿಹಾರ ಕೋರಿಲ್ಲ ಎಂದರೆ ನಮಗೆ ಮೋಸ ಮಾಡಿ 4 ನೇ ಪ್ರತಿವಾದಿ ಅವರ ಹೆಸರಿಗೆ ಸ್ವತ್ತು ಮಾಡಿಸಿಕೊಂಡಿದ್ದಾರೆ. ಖಾತೆ ವಜಾ ಮಾಡಿ ಎಂದು ಕಂದಾಯ ಅಧಿಕಾರಿಗಳ ಮುಂದೆ ಅಪೀಲು ಸಲ್ಲಿಸಿದ್ದೀರಾ ಎಂದರೆ ಜಮೀನುಗಳ ಮೇಲೆ ಕೇಸ್ ಇದೆ. ನನ್ನ ತಂದೆಗೆ ಇದ್ದ ಖಾತೆ ನಂತರ 4 ನೇ ಪ್ರತಿವಾದಿ ಹೆಸರಿಗೆ ಆಗಿದೆ ಎಂದರೆ ಮೋಸದಿಂದ ಅವರ ಹೆಸರಿಗೆ ಮಾಡಿಸಿಕೊಂಡಿದ್ದಾರೆ. ಮೋಸದಿಂದ ಖಾತೆ ಆಗಿದೆ ಎಂದು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ನಾನು ದಾವೆ ಸಲ್ಲಿಸಿದಾಗ ಖಾತೆ ನನ್ನ ತಂದೆಯ ಹೆಸರಿಗೆ ಇತ್ತು ಎಂದು ನುಡಿಯುತ್ತಾರೆ. ದಾವಾ ಸ್ವತ್ತಿನ ಮನೆಯಲ್ಲಿ 4 ನೇ ಪ್ರತಿವಾದಿ ವಾಸವಿದ್ದಾರೆ ಎಂದರೆ ಸರಿ.

ಈ ಹಂತದಲ್ಲಿ ಸಾಕ್ಷಿಯ ಮುಂದುವರೆದ ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು, ಆಲಿಸಿ ಮುಂದೂಡಲಾಯಿತು.

(ಮುಕ್ತ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ . ಹೇ. ಕೇ. ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ. ಎಫ್. ಸಿ.,
ಪಾವಗಡ